ಸಲ್ಲಿಸಲಾಗುವುದು. ಕೇಂದ್ರ ಸರ್ಕಾರದ ಅನುಮೋದನೆ ದೊರೆತ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

ಈ) ವಿಧಿ ವಿಧಾನಗಲು ಉಲ್ಲಂಘನೆಯಾಗಿದ್ದಲ್ಲಿ ಇದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗಿದೆಯೇ (ಮಾಹಿತಿ ಒದಗಿಸುವುದು)?

ವಿದಿ ವಿಧಾನಗಳನ್ನು ಉಲ್ಲಂಘಿಸಲಾಗಿರುವುದಿಲ್ಲ.

ವಿಷಯ:ಹೊಯ್ಸಳರ ಕಾಲದ ದೇವಾಲಯಗಳನ್ನು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೆ ಸೇರಿಸುವುದು.

214 ಶ್ರೀ ಶ್ರೀನಿವಾಸ್ ಎಂ.

ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು)

ಅ) ಮಂಡ್ಯ ತಾಲ್ಲೂಕು ಹೊಸಬೂದನೂರು ಮತ್ತು ಬಸರಾಳು ಗ್ರಾಮಗಳಲ್ಲಿ ಹೊಯ್ಸಳರ ಕಾಲದ ಪುರಾತನ ದೇವಾಲಯಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು.

ಆ) ಹಾಗಿದ್ದಲ್ಲಿ, ಈ ದೇವಸ್ಥಾನಗಳನ್ನು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಂಡು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಹೊಸಬೂದಿನೂರಿನಲ್ಲಿ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ತಾನ ಹಾಗೂ ಬಸರಾಳುನಲ್ಲಿರುವ ಶ್ರೀ ಮಲ್ಲಿಕಾರ್ಜುನಸ್ವಾಮಿ ದೇವಸ್ಥಾನಗಳು ಹೊಯ್ಸಳ ವಾಸ್ತುಶಿಲ್ಪ ಉಳ್ಳ ದೇವಾಲಯಗಳಾಗಿರುತ್ತವೆ.

ಈ ದೇವಾಲಯಗಳು ಕೇಂದ್ರ ಪುರಾತತ್ವ ಮತ್ತು ಸಂರಕ್ಷಣಾ ಇಲಾಖೆ ಅಧೀನದಲ್ಲಿದ್ದು ಇದನ್ನು ರಾಷ್ಟ್ರೀಯ ಸ್ಮಾರಕಗಳೆಂದು ಗುರುತಿಸಲಾಗಿದೆ. ಇವನ್ನು ಪ್ರವಾಸೋದ್ಯಮ ಇಲಾಖೆಗೆ ವಹಿಸುವ ಪ್ರಸ್ತಾಪ ಇರುವುದಿಲ್ಲ.

ಹೊಸಬುದನೂರಿನಲ್ಲಿರುವ ಶ್ರೀಅನಂತಪದ್ಮನಾಭಸ್ವಾಮಿ ದೇವಾಲಯ ಹಾಗೂ ಕಾಶಿವಿಶ್ವೇಶ್ವರ ದೇವಾಲಯಗಳು ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಯ ರಕ್ಷಣಾ ವ್ಯಾಪ್ತಿಯಲ್ಲಿ ಬರುವುದರಿಂದ ಇವುಗಳ ಸಂರಕ್ಷಣಾ: ಅಭಿವೃದ್ಧಿ ಕಾರ್ಯಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ.

ಇ) ಹಾಗಿದ್ದಲ್ಲಿ, ಎಂದಿನಿಂದ ಈ ದೇವಸ್ಥಾನಗಳನ್ನು ಪ್ರವಾಸೋದ್ಯಮ ಇಲಾಖೆಗೆ ತೆಗೆದುಕೊಳ್ಳಲಾಗುವುದು;

ಈ ದೇವಾಲಯಗಳನ್ನು ಪ್ರವಾಸೋದ್ಯಮ ಇಲಾಖೆಗೆ ತೆಗೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಈ ದೇವಾಲಯಗಳಿಗೆ ಪ್ರವಾಸಿಗರನ್ನು ಆಕರ್ಷಿಸಲು ಸರ್ಕಾರ ಮೂಲಭೂತ ಸೌಲಭ್ಯಗಳನ್ನು ಕಲ್ಪಸುವುದೇ;

ಈ ದೇವಾಲಯಗಳ ಬಗ್ಗೆ ಮಾಹಿತಿಯನ್ನು ಪ್ರವಾಸಿ ಪ್ರಚಾರ ಸಾಮಾಗ್ರಿಗಳಲ್ಲಿ ಸೇರಿಸಿಕೊಳ್ಳಲಾಗಿದ್ದು, ಪ್ರವಾಸಿಗರಿಗೆ ಮಾಹಿತಿ ನೀಡಲಾಗುತ್ತಿದೆ. ಹೊಸಬೂದನೂರು ಗ್ರಾಮವು ಮಂಡ್ಯ ಜಿಲ್ಲಾ ಕೇಂದ್ರದಿಂದ ನಾಲ್ಕು ಕಿ.ಮೀ ದೂರದಲ್ಲಿದ್ದು ಇಲ್ಲಿ ಯಾವುದೇ ಸೌಲಭ್ಯಗಳ ನಿರ್ಮಾಣ ಅಗತ್ಯ ಕಂಡು ಬರುವುದಿಲ್ಲ ಹಾಗೂ ಸೂಕ್ತ ನಿವೇಶನವಿರುವುದಿಲ್ಲ.

ಆದರೆ, ಬಸರಾಳು ಗ್ರಾಮವು ಮಂಡ್ಯದಿಂದ 24 ಕಿ.ಮೀ ದೂರದಲ್ಲಿದ್ದು, ಇಲ್ಲಿ ಸೂಕ್ತವಾದ ನಿವೇಶನ ದೊರೆತಲ್ಲಿ ಶೌಚಾಲಯ ಹಾಗೂ ಕುಡಿಯುವ ನೀರನ ಸೌಲಭ್ಯವನ್ನು ನಿರ್ಮಿಸಬಹುದಾಗಿರುತ್ತದೆ. ಈ ಬಗ್ಗೆ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯಿಂದ ವರದಿ ತರಿಸಿಕೊಳ್ಳಲಾಗುವುದು.

ಉ) ಹಾಗಿದ್ದಲ್ಲಿ, ಇದಕ್ಕೆ ಸರ್ಕಾರ ಕೂಡಲೇ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ;

ಸಮಿತಿಯಿಂದ ನಿವೇಶನದ ಲಭ್ಯತೆಯ ಬಗ್ಗೆ ವರದಿ ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಊ) ಎಂದಿನಿಂದ ಅನುದಾನ ಬಿಡುಗಡೆ ಮಾಡಲಾಗುವುದು?

ನಿವೇಶನ ಹಾಗೂ ಪ್ರಸ್ತಾವನೆಗಳನ್ನು ಜಿಲ್ಲಾಧಿಕಾರಿಗಳಿಂದ ಸ್ವೀಕರಿಸಿದ ನಂತರ ಅನುದಾನ ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ಕರ್ನಾಟಕ ವಿಧಾನ ಸಭೆ

215 ಶ್ರೀ ಈಶ್ವರ ಭೀಮಣ್ಣ ಖಂಡ್ರೆ(ಭಾಲ್ಕಿ)

ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ವಿಮಾನ ನಿಲ್ದಾಣ ಮತ್ತು ಹೆಲಿಪ್ಯಾಡ್‌ಗಳನ್ನು ನಿರ್ಮಾಣ ಮಾಡಲಾಗುವುದು; ಈ ದಿಸೆಯಲ್ಲಿ ಯಾವ ಯಾವ ಕ್ರಮಗಳನ್ನು ಇಲ್ಲಿಯವರೆವಿಗೆ ಕೈಗೊಳ್ಳಲಾಗಿದೆ.

ಆ) ಇವುಗಳ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು; ಇದಕ್ಕಾಗಿ ಇಲ್ಲಿಯವರೆವಿಗೆ ಬಿಡುಗಡೆಯಾಗಿರುವ ಹಾಗೂ ವೆಚ್ಚವಾಗಿರುವ ಹಣದ ಮೊತ್ತವೆಷ್ಟು (ನಿಲ್ದಾಣವಾರು ವಿವರಗಳನ್ನು ಒದಗಿಸುವುದು);

1. ಗುಲ್ಬರ್ಗ, ಶಿವಮೊಗ್ಗ ಹಾಸನ, ಬಿಜಾಪುರ ಹಾಗೂ ಬಳ್ಳಾರಿಗಳಲ್ಲಿ ರಾಜ್ಯ ಸರ್ಕಾರ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ನೆಲೆಯಲ್ಲಿ (ಪಿಪಿಪಿ ಮೋಡ್) ವಿಮಾನ ನಿಲ್ದಾಣಗಳನ್ನು ಅಭಿವೃದ್ಧಿ ಪಡಿಸಲು ಕ್ರಮವಹಿಸುತ್ತಿದೆ.